ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	583
ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	11.12.2020

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ಬೀದರ್ ಜಿಲ್ಲೆಯಲ್ಲಿ ಸುಮಾರು 4 ರಿಂದ 5 ಎಂ.ಎಸ್.ಪಿ.ಟಿ.ಸಿ. ನಡೆಯುತ್ತಿದ್ದು ಇದರಿಂದ ಗುಣಮಟ್ಟದ ಆಹಾರ ಸರಬರಾಜು ಮಾಡಲು ಆಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ;	ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ಅಂಗನವಾಡಿ ಕೇಂದ್ರಗಳಿಗೆ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು ಇಲಾಖಾ ವತಿಯಿಂದ 137 ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನಾ ಮತ್ತು ತರಬೇತಿ ಕೇಂದ್ರ (ಎಂ.ಎಸ್.ಪಿ.ಟಿ.ಸಿ.) ಗಳನ್ನು ಸ್ಥಾಪಿಸಲಾಗಿದೆ. ಬೀದರ್ ಜಿಲ್ಲೆಯಲ್ಲಿರುವ 05 ಎಂ.ಎಸ್.ಪಿ.ಟಿ.ಸಿ. ಗಳು ಪೂರಕ ಪೌಷ್ಠಿಕ ಆಹಾರವನ್ನು ಸರಬರಾಜು ಮಾಡುತ್ತಿವೆ. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯು ಆಹಾರ ಪದಾರ್ಥಗಳ ಬೆಲೆಯನ್ನು ಹಾಗೂ ಮೆನುವನ್ನು ನಿರ್ಧರಿಸುತ್ತದೆ. ಮೆನುವಿನ ಆಧಾರದ ಮೇಲೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಆಹಾರ ಪದಾರ್ಥಗಳಿಗೆ ಬೇಡಿಕೆಯನ್ನು ಸಲ್ಲಿಸುತ್ತಾರೆ. ಬೇಡಿಕೆಯಂತೆ ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನಾ ಮತ್ತು ತರಬೇತಿ ಕೇಂದ್ರ (ಎಂ.ಎಸ್.ಪಿ.ಟಿ.ಸಿ.) ಗಳು ಜಿಲ್ಲಾಧಿಕಾರಿಗಳು ನಿಗದಿಪಡಿಸಿರುವ ದರದಲ್ಲಿ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುತ್ತವೆ. ಅಂಗನವಾಡಿ ಕೇಂದ್ರಗಳಿಗೆ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುವ ಮುನ್ನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ಗುಣಮಟ್ಟದ ಬಗ್ಗೆ ಪರಿಶೀಲಿಸಲಾಗುತ್ತಿದೆ. ಆಹಾರ ಸಾಮಗ್ರಿಗಳು ತೀರ ಕಳಪೆ ಮಟ್ಟದ್ದಾಗಿರುವ ಬಗ್ಗೆ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ.
ಆ.	ಇದಕ್ಕೆ ಯಾರು ಹೊಣೆಗಾರರು; ಹಾಗೂ ಅಂತಹ ಅಧಿಕಾರಿಗಳ ವಿರುದ್ಧ ಯಾವ ಕ್ರಮ ವಹಿಸಲಾಗಿದೆ; ಕ್ರಮ ಕೈಗೊಳ್ಳದಿದ್ದಲ್ಲಿ ಇದಕ್ಕೆ ಕಾರಣವೇನು?	ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

ಇ.	ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿ 2004 ರಲ್ಲಿ ರಚಿಸಿರುವ ವೃಂದ ಮತ್ತು ನೇರ ನೇಮಕಾತಿ ನಿಯಮಗಳನ್ನು ಪರಿಷ್ಕರಣೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಕ್ರಮ ವಹಿಸಲಾಗುವುದು.	ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿ 2004ರಲ್ಲಿ ರಚಿಸಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಣೆ ಮಾಡುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ/ಅಭಿಪ್ರಾಯವನ್ನು ಕೋರಲು ಕ್ರಮವಹಿಸಲಾಗುತ್ತಿದ್ದು, ಸದರಿ ಇಲಾಖೆಯ ಸಹಮತಿ/ಅಭಿಪ್ರಾಯ ದೊರೆತ ಕೂಡಲೇ ನಿಯಮಾನುಸಾರ ಪರಿಶೀಲಿಸುವುದರೊಂದಿಗೆ ಅಂತಿಮ ನಿಯಮಗಳನ್ನು ಹೊರಡಿಸಲು ಕಾಲಮಿತಿಯಲ್ಲಿ ಕ್ರಮವಹಿಸಲಾಗುವುದು.
ಈ.	ಹೈದ್ರಾಬಾದ್ ಕರ್ನಾಟಕ ಪ್ರದೇಶ ಸಂವಿಧಾನ ಅನುಚ್ಛೇದ 371 ಜೆ ಅಡಿಯಲ್ಲಿ ಸ್ಥಳೀಯ ರಾಜ್ಯ ವೃಂದ ರಚಿಸಿ ಅಧಿಸೂಚನೆ ಹೊರಡಿಸಲಾಗಿದೆಯೇ;	ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ನಿರ್ದೇಶಕರ ಹಂತದಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿ ಸಂವಿಧಾನದ ಅನುಚ್ಛೇದ 371 ಜೆ ಅಡಿಯಲ್ಲಿ ಸ್ಥಳೀಯ ರಾಜ್ಯ ವೃಂದ ರಚಿಸಿ ಆದೇಶ ಹೊರಡಿಸಲಾಗಿರುತ್ತದೆ.
ಉ.	ರಾಜ್ಯ ವೃಂದದಲ್ಲಿ ಇರುವ ಸಹಾಯಕ ನಿರ್ದೇಶಕರ ಒಂದು ಮತ್ತು ಸಹಾಯಕ ಆಯುಕ್ತರು ಒಂದು ಹುದ್ದೆ ಇದ್ದು ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ರಾಜ್ಯ ವೃಂದದ ಯಾವ ಹುದ್ದೆ ನಿಗದಿಗೊಳಿಸಲಾಗಿರುತ್ತದೆ?	ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿ ಕೇವಲ ಒಂದೇ ಒಂದು ಸಹಾಯಕ ನಿರ್ದೇಶಕರ ಹುದ್ದೆ ಮಂಜೂರಾಗಿದ್ದು, ಸದರಿ ಹುದ್ದೆಯನ್ನು ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಗುರುತಿಸಿರುವುದಿಲ್ಲ. ಉಳಿದಂತೆ ಈ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು-2004ರಲ್ಲಿ ರಾಜ್ಯ ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಕಛೇರಿಯಲ್ಲಿರುವ ಸಹಾಯಕ ಆಯುಕ್ತರ ಹುದ್ದೆಯು ಸೇರ್ಪಡೆಯಾಗಿರುವುದಿಲ್ಲ. ಮುಂದುವರೆದು, ರಾಜ್ಯ ಆಯುಕ್ತರು, ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಕಛೇರಿಯಲ್ಲಿ ಹೈದರಾಬಾದ್-ಕರ್ನಾಟಕ ಪ್ರದೇಶದ ಸಂವಿಧಾನ ಅನುಚ್ಛೇದ 371 ಜೆ ಅಡಿಯಲ್ಲಿ ಸ್ಥಳೀಯ ವೃಂದ ರಚಿಸಿ ಪ್ರತ್ಯೇಕವಾಗಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಈ ಕಛೇರಿಗೆ ಒಂದು ಸಹಾಯಕ ಆಯುಕ್ತರ ಹುದ್ದೆ ಮಂಜೂರಾಗಿದ್ದು, ಈ ಹುದ್ದೆಯನ್ನು ಸ್ಥಳೀಯ ವೃಂದದಲ್ಲಿ ಹೈದರಾಬಾದ್-ಕರ್ನಾಟಕ ಪ್ರದೇಶದಡಿ ಗುರುತಿಸಿರುವುದಿಲ್ಲ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ: ಮಮಇ 237 ಐಸಿಡಿ 2020